ವಿಜಯವಾಣಿ ನಂ.1

ತಾವು ಈ ಮಾಹಿತಿಯನ್ನು SR WORLD ಟೆಲಿಗ್ರಾಂ ಗ್ರೂಪ್ ನಿಂದ ಪಡೆದಿರುವಿರಿ. ಈಗಾಗಲೇ 4 ಲಕ್ಷ ದಷ್ಟು ಸ್ಪರ್ಧಾರ್ಥಿಗಳು ಆ ಗ್ರೂಪ್ ಗೆ Join ಆಗಿದ್ದಾರೆ. ನೀವೂ Join ಆಗಿ, ಗ್ರೂಪ್ ಲಿಂಕ್: https://t.me/SRWORLDShankarBellubbiSir

# ಗ್ರಾಮ ಲೆಕ್ಕಾಧಿಕಾರಿ, ಸರ್ವೇಯರ್ ಎಡಿಎಲ್ಆರ್ ನೇಮಕಾತಿಗೆ ಆದ್ಯತೆ

**ಬೆಂಗಳೂರು:** ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಾಧಿಕಾರಿ, ಸರ್ವೇಯರ್ ಹಾಗೂ ಎಡಿಎಲ್ಆರ್ ಹುದ್ದೆಗಳ ಭರ್ತಿಗೆ ಬಜೆಟ್‌ನಲ್ಲಿ ಒಪ್ಪಿಗೆ ಸಿಗುವ ನಿರೀಕ್ಷೆ ಇದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.



» **ಕೆಇಎ ಮೂಲಕ ಪಾರದರ್ಶಕ ಪರೀಕ್ಷೆ**

» **ಸಭೆ ನಡೆಸಿದ ಸಚಿವ ಕೃಷ್ಣ ಬೈರೇಗೌಡ**

ಈ ಸಂಬಂಧ ಮಂಗಳವಾರ ಅಧಿಕಾರಿಗಳ ಜತೆ ಸಭೆ ನಡೆಸಿದ ಅವರು, ಹುದ್ದೆಗಳ ಭರ್ತಿಗೆ ಮುಖ್ಯಮಂತ್ರಿ ಅವರೂ ಆಸಕ್ತರಾಗಿದ್ದಾರೆ ಎಂದರು. ರಾಜ್ಯದಲ್ಲಿ 1500 ಗ್ರಾಮ ಲೆಕ್ಕಾಧಿಕಾರಿ, 500 ಸರ್ವೇಯರ್, 60 ಎಡಿಎಲ್ಆರ್‌ಗಳ ಹುದ್ದೆಗಳ ಭರ್ತಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ತಕ್ಷಣ ಎಷ್ಟು ಹುದ್ದೆಗಳ ಭರ್ತಿಗೆ ಅವಕಾಶ ಸಿಗುತ್ತದೆ ಎಂಬುದನ್ನು ನೋಡಿಕೊಂಡು ನೇಮಕಾತಿ ಪ್ರಕ್ರಿಯೆ ನಡೆಸುತ್ತೇವೆ ಎಂದು ಹೇಳಿದರು. ಗ್ರಾಮ ಲೆಕ್ಕಾಧಿಕಾರಿಗಳ ನೇಮಕವನ್ನು ಜಿಲ್ಲಾಧಿಕಾರಿಗಳೇ ಮಾಡಬೇಕು. ಅಭ್ಯರ್ಥಿಗಳು ಪಡೆದ ಅಂಕಗಳ ಆಧಾರದಲ್ಲಿ ನೇಮಕಾತಿಗೆ ಡಿಸಿಗಳಿಗೆ ಅವಕಾಶ ನೀಡಲಾಗುತ್ತದೆ ಎಂದು ವಿವರಿಸಿದರು. ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಪಾರದರ್ಶಕವಾಗಿ ನಡೆಸಲು ಅಧಿಕಾರಿಗಳ ಜತೆಯಲ್ಲಿ ಚರ್ಚೆ ನಡೆಸಲಾಗಿದೆ. ಅಕ್ರಮಗಳಿಗೆ ಅವಕಾಶ ಇಲ್ಲದಂತೆ ಪರೀಕ್ಷೆ ನಡೆಸಲಾಗುತ್ತದೆ ಎಂದು ಹೇಳಿದರು.

**ತಾಲೂಕು ಕಚೇರಿಗಳ ಅಭಿವೃದ್ಧಿ:** ರಾಜ್ಯದಲ್ಲಿ 63 ಹೊಸ ತಾಲೂಕುಗಳು ರಚನೆಯಾಗಿ ಐದು ವರ್ಷ ಕಳೆದರೂ ಆಡಳಿತ ಸೌಧಗಳು ನಿರ್ಮಾಣವಾಗಿಲ್ಲ. ಕಚೇರಿಗಳೇ ಇಲ್ಲದೆ ತೊಂದರೆಯಾಗುತ್ತಿದೆ. ಇದಕ್ಕಾಗಿ ಬಜೆಟ್‌ನಲ್ಲಿ ಹಣ ಒದಗಿಸುವಂತೆ ಮನವಿ ಮಾಡಲಾಗಿದೆ. ಮುಂದಿನ 2-3 ವರ್ಷಗಳಲ್ಲಿ ನಿರ್ಮಾಣ ಮಾಡಲಾಗುವುದು ಎಂದು ಕೃಷ್ಣ ಬೈರೇಗೌಡ ಮಾಹಿತಿ ನೀಡಿದರು. ಹಾಲಿ ಇರುವ ತಾಲೂಕು ಆಡಳಿತ ಸೌಧಗಳಲ್ಲಿ ಸುಮಾರು 25 ಕಡೆಗಳಲ್ಲಿ ಕಟ್ಟಡಗಳು ಹಳೆಯದಾಗಿವೆ. ದುರಸ್ತಿಯಾಗಬೇಕೆಂದು ಬೇಡಿಕೆ ಇದೆ. ಆ ಬಗ್ಗೆಯೂ ಸರ್ಕಾರ ಗಮನಹರಿಸಲಿದೆ ಎಂದರು.

Bengaluru Edition
Jan 31, 2024 Page No. 13
Powered by : eReleGo.com

ಕನ್ನಡಪ್ರಭ

ತಾವು ಈ ಮಾಹಿತಿಯನ್ನು SR WORLD ಟೆಲಿಗ್ರಾಂ ಗ್ರೂಪ್ ನಿಂದ ಪಡೆದಿರುವಿರಿ.
ಈಗಾಗಲೇ 4 ಲಕ್ಷ ದಷ್ಟು ಸ್ಪರ್ಧಾರ್ಥಿಗಳು ಆ ಗ್ರೂಪ್ ಗೆ
Join ಆಗಿದ್ದಾರೆ. ನೀವೂ Join ಆಗಿ, ಗ್ರೂಪ್ ಲಿಂಕ್:
👇👇👇👇👇👇👇
https://t.me/SRWORLDShankarBellubbiSir

# 2000 ಹುದ್ದೆ ಭರ್ತಿಗೆ ಅನುಮತಿಗೆ ಕಂದಾಯ ಇಲಾಖೆ ಪ್ರಸ್ತಾವನೆ

ಬೆಂಗಳೂರು: ರಾಜ್ಯದಲ್ಲಿ ಖಾಲಿ ಇರುವ ಭೂ ದಾಖಲೆಗಳ ಉಪ ನಿರ್ದೇಶಕರು (ಡಿಡಿಎಲ್ಆರ್), ಸರ್ವೇಯರ್ ಹಾಗೂ ಗ್ರಾಮ ಲೆಕ್ಕಿಗ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ಬಜೆಟ್‌ನಲ್ಲಿ ವಿಶೇಷ ಅನುದಾನ ಮೀಸಲಿಡುವಂತೆ ಕಂದಾಯ ಇಲಾಖೆಯಿಂದ ಮುಖ್ಯಮಂತ್ರಿಗಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಕಂದಾಯ ಇಲಾಖೆ ಲೆಕ್ಕ ಹಾಕಿರುವಂತೆ ರಾಜ್ಯದಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ 500 ಡಿಡಿಎಲ್ಆರ್, ಸರ್ವೇಯರ್ ಹಾಗೂ 1,500 ಗ್ರಾಮ ಲೆಕ್ಕಿಗ ಹುದ್ದೆಗಳನ್ನು ತುರ್ತಾಗಿ ಭರ್ತಿ ಮಾಡಬೇಕಿದೆ. ಅದಕ್ಕೆ ಸಂಬಂಧಿಸಿದಂತೆ 2024-25ನೇ ಸಾಲಿನ ಬಜೆಟ್‌ನಲ್ಲಿ ವಿಶೇಷ ಅನುದಾನ ಮೀಸಲಿಡುವ ಬಗ್ಗೆ ಪ್ರಸ್ತಾವನೆಯನ್ನೂ ಸಲ್ಲಿಸಲಾಗಿದೆ. ಈ ಮಧ್ಯೆ, ರಾಜ್ಯ ಸರ್ಕಾರಕ್ಕೆ ಸಲ್ಲಿಸಲಾಗಿರುವ ಪ್ರಸ್ತಾವನೆ ಹಾಗೂ ಬಜೆಟ್‌ನಲ್ಲಿ ಘೋಷಿಸಿದ ನಂತರ ಶೀಘ್ರದಲ್ಲಿ ಖಾಲಿ ಹುದ್ದೆ ಭರ್ತಿಗೆ ಕ್ರಮ ಕೈಗೊಳ್ಳುವ ಕುರಿತು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ಮಂಗಳವಾರ ವಿಕಾಸಸೌಧದಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

BENGALURU Edition
Jan 31, 2024 Page No. 08
Powered by : eReleGo.com